# ಮಂಗಳೂರು ವಿಶ್ವವಿದ್ಯಾನಿಲಯ

ದಿನಾಂಕ 14.06.2023ರಂದು ಪೂರ್ವಾಹ್ನ ಗಂಟೆ 11.00ಕ್ಕೆ ಸರಿಯಾಗಿ ಆನ್‌ಲೈನ್ ಮೂಲಕ ನಡೆದ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿನ 2023ನೇ ಸಾಲಿನ ತೃತೀಯ ವಿಶೇಷ ಸಭೆಯ ನಡವಳಿಗಳು.

**ಉಪಸ್ಥಿತರು:**

| **ಕ್ರ.ಸಂ.** | | | **ಸಹಿ** |
|---|---|---|---|
| 1. | ಪ್ರೊ. ಜಯರಾಜ್ ಅಮೀನ್<br>ಕುಲಪತಿಗಳು | ಅಧ್ಯಕ್ಷರು | |
| 2. | ಡಾ. ವಿಷ್ಣುಮೂರ್ತಿ ಕೆ. ಎ..,<br>ಜಂಟಿ ನಿರ್ದೇಶಕರು<br>(ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 3. | ಪ್ರೊ. ಕರುಣಾಕರ್ ಎ. ಕೋಟೆಗಾರ್ | ಸದಸ್ಯರು | |
| 4. | ಶ್ರೀ ರವಿಚಂದ್ರ ಪಿ. ಎಂ. | ಸದಸ್ಯರು | |
| 5. | ಡಾ. ರಾಜೇಂದ್ರ ಎಸ್. ನಾಯಕ್ | ಸದಸ್ಯರು | |
| 6. | ಶ್ರೀ ಕೃಷ್ಣಪ್ರಸಾದ್ ಕೆ. ಎನ್. | ಸದಸ್ಯರು | |
| 7. | ಶ್ರೀಮತಿ ಸಮೀರ ಕೆ.ಎ. | ಸದಸ್ಯರು | |
| 8. | ಡಾ. ಸಿಪ್ರಿಯನ್ ಮೊಂತೇರೋ<br>ಪ್ರಾಂಶುಪಾಲರು, ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ,<br>ಸಾರ್ವಜನಿಕ ಶಿಕ್ಷಣ ಆಯುಕ್ತರ ಪರವಾಗಿ | ಸದಸ್ಯರು | |
| 9. | ಪ್ರೊ. ರಾಜುಕೃಷ್ಣ ಚಲಣ್ಣವರ್<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು | |
| 10. | ಪ್ರೊ. ವೈ. ಸಂಗಪ್ಪ<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ ಆಹ್ವಾನಿತರು | |
| 11. | ಪ್ರೊ. ಕಿಶೋರ್ ಕುಮಾರ್ ಸಿ. ಕೆ.<br>ಕುಲಸಚಿವರು (ಆಡಳಿತ) | ಸದಸ್ಯ ಕಾರ್ಯದರ್ಶಿ | |

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

➢ **ಸ್ವಾಗತ:**

I. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 16(2)ರನ್ವಯ ಘನತೆವೆತ್ತ ರಾಜ್ಯಪಾಲರ ಕಚೇರಿ ಪತ್ರ ಸಂಖ್ಯೆ:GS 02 MLM 2023 ದಿನಾಂಕ 31.05.2023 ರಂತೆ ಪ್ರೊ. ಜಯರಾಜ್ ಅಮೀನ್, ಡೀನರು, ಕಲಾ ನಿಕಾಯ ಇವರನ್ನು ದಿನಾಂಕ 02.06.2023ರ ಅಪರಾಹ್ನದಿಂದ ಅನ್ವಯವಾಗುವಂತೆ ಮಂಗಳೂರು ವಿಶ್ವವಿದ್ಯಾನಿಲಯದ ಪ್ರಭಾರ ಕುಲಪತಿಗಳನ್ನಾಗಿ ನೇಮಕ ಮಾಡಲಾಗಿರುತ್ತದೆ. ಇವರನ್ನು ಕುಲಸಚಿವರು ಸಭೆಗೆ ಸ್ವಾಗತಿಸಿದರು.

II. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 28 (1)(ಬಿ) ಪ್ರಕಾರ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರ ಪರವಾಗಿ ಮಂಗಳೂರು ಸಿಂಡಿಕೇಟು ಸಭೆಗಳಿಗೆ ಹಾಜರಾಗಲು ಆಗಮಿಸಿರುವ ಡಾ. ವಿಷ್ಣುಮೂರ್ತಿ ಕೆ. ಎ., ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಚೇರಿ, ಮಂಗಳೂರು ಇವರನ್ನು ಕುಲಸಚಿವರು ಸಭೆಗೆ ಸ್ವಾಗತಿಸಿದರು.

III. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 28(1)(ಎಫ್) ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಸದಸ್ಯರುಗಳಾಗಿ ಮಾನ್ಯ ಕುಲಪತಿಗಳಿಂದ ನಾಮನಿರ್ದೇಶನಗೊಂಡಿರುವ ಈ ಕೆಳಗಿನ ಪ್ರಾಂಶುಪಾಲರುಗಳನ್ನು ಕುಲಸಚಿವರು ಸಭೆಗೆ ಸ್ವಾಗತಿಸಿದರು.

1. ಶ್ರೀ ಕೃಷ್ಣಪ್ರಸಾದ್ ಕೆ. ಎನ್., ಪ್ರಾಂಶುಪಾಲರು, ಶ್ರೀರಾಮ ಪ್ರಥಮ ದರ್ಜೆ ಕಾಲೇಜು, ಕಲ್ಲಡ್ಕ
2. ಶ್ರೀ ಎಚ್. ತ್ರಿಲೋಕನಾಥ್, ಪ್ರಾಂಶುಪಾಲರು, ಶ್ರೀದೇವಿ ಕಾಲೇಜ್ ಆಫ್ ಇನ್ಫಾರ್ಮೇಶನ್ ಸೈನ್ಸ್, ಮಂಗಳೂರು

➢ **ಕೃತಜ್ಞತೆ:**

I. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 16(2)ರನ್ವಯ ಘನತೆವೆತ್ತ ರಾಜ್ಯಪಾಲರ ಕಚೇರಿ ಪತ್ರ ಸಂಖ್ಯೆ:ಜಿಎಸ್ 01 ಎಮ್ಎಲ್ಎಮ್ 2018 ದಿನಾಂಕ 03.06.2023 ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಕುಲಪತಿಗಳಾಗಿ ನೇಮಕಗೊಂಡಿದ್ದ ಪ್ರೊ. ಪಿ. ಸುಬ್ರಹ್ಮಣ್ಯ ಯಡಪಡಿತ್ತಾಯ ಇವರ ಅಧಿಕಾರವಧಿಯು ದಿನಾಂಕ 02.06.2023ರಂದು ಅಂತ್ಯಗೊಂಡಿರುವ ವಿಷಯವನ್ನು ಸಭೆಗೆ ತಿಳಿಸುತ್ತಾ, ಇವರು ವಿಶ್ವವಿದ್ಯಾನಿಲಯದ ಕುಲಪತಿಗಳಾಗಿ ಮತ್ತು ಸಿಂಡಿಕೇಟು ಸಭೆಗಳ ಅಧ್ಯಕ್ಷರಾಗಿ ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಿರುವುದಕ್ಕೆ ಸಿಂಡಿಕೇಟಿನಿಂದ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

II. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 28 (1)(ಬಿ) ಪ್ರಕಾರ

ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರ ಪರವಾಗಿ ಜಂಟಿ ನಿರ್ದೇಶಕರ ನೆಲೆಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟು ಸಭೆಗಳಿಗೆ ಹಾಜರಾಗುತ್ತಿದ್ದ ಡಾ. ಗಿರಿಧರರಾವ್ ಎಂ.ಎಸ್. ಇವರನ್ನು ಮಾನ್ಯ ಆಯುಕ್ತರ ಪತ್ರದನ್ವಯ ಜಂಟಿ ನಿರ್ದೇಶಕರ ಕರ್ತವ್ಯದಿಂದ ಬಿಡುಗಡೆಗೊಳಿಸಿರುವ ವಿಷಯವನ್ನು ಕುಲಸಚಿವರು ಸಭೆಗೆ ತಿಳಿಸಿದರು.

III. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 28(1)(ಎಫ್) ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಸದಸ್ಯರಾಗಿ ಮಾನ್ಯ ಕುಲಪತಿಗಳಿಂದ ನಾಮನಿರ್ದೇಶನಗೊಂಡಿದ್ದ ಈ ಕೆಳಗಿನ ಪ್ರಾಂಶುಪಾಲರುಗಳ ಸದಸ್ಯತ್ವದ ಅವಧಿಯು ಕೊನೆಗೊಂಡಿರುವುದರಿಂದ ಸದರಿಯವರುಗಳನ್ನು ಸಿಂಡಿಕೇಟು ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

1. ಶ್ರೀ ಮೋಹನ್ ನಾಯ್ಕ್, ಪ್ರಾಂಶುಪಾಲರು, ಕರಾವಳಿ ಕಾಲೇಜು, ಮಂಗಳೂರು
2. ಶ್ರೀ ಲೆವಿನ್ ಡಿ'ಸೋಜ, ಪ್ರಾಂಶುಪಾಲರು, ಉಡುಪಿ ಇನ್ಸ್ಟಿಟ್ಯೂಟ್ ಆಫ್ ಹೋಟೇಲ್ & ಟೂರಿಸಂ ಸೈನ್ಸ್, ಮಣಿಪಾಲ

ಇವರುಗಳು ತಮ್ಮ ಸದಸ್ಯತ್ವದ ಅವಧಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದಕ್ಕಾಗಿ ಇವರಿಗೆ ಸಿಂಡಿಕೇಟ್ ಹಾಗೂ ಮಂಗಳೂರು ವಿಶ್ವವಿದ್ಯಾನಿಲಯದ ಪರವಾಗಿ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

I. ನಡವಳಿಗಳ ದೃಢೀಕರಣ

1. ದಿನಾಂಕ 25.05..2023ರಂದು ನಡೆದ ಸಿಂಡಿಕೇಟಿನ 2023ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ

- **ದೃಢೀಕರಿಸಲಾಯಿತು. –**

II. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ :ವಿ.ಸ.3:1 (2023)

ವಿಷಯ: ಶೈ.ವ. 2023-24ನೇ ಸಾಲಿಗೆ ಹೊಸ/ವಿಸ್ತರಣಾ/ಮುಂದುವರಿಕೆ/ ಶಾಶ್ವತ ಸಂಯೋಜನೆ / ಶಾಶ್ವತ ಸಂಯೋಜನೆಯ ಮುಂದುವರಿಕೆ ಸಂಯೋಜನೆ ಬಗ್ಗೆ ಕಾಲೇಜುಗಳ / ವಿದ್ಯಾಸಂಸ್ಥೆಗಳ ಪರಿಶೀಲನೆಗೆ ಸ್ಥಳೀಯ ವಿಚಾರಣಾ ಸಮಿತಿಯನ್ನು ರಚಿಸುವ ಬಗ್ಗೆ.

ನಿರ್ಣಯ: ಘಟನೋತ್ತರವಾಗಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ :ವಿ.ಸ.3:2 (2023)

ವಿಷಯ: ಮಂಗಳೂರು ಇನ್ಸ್ಟಿಟ್ಯೂಟ್ ಆಫ್ ಫೈರ್ ಆಂಡ್ ಸೇಫ್ಟಿ ಇಂಜಿನಿಯರಿಂಗ್, ಮಂಗಳೂರು ಎಂಬ ವಿದ್ಯಾಸಂಸ್ಥೆಯ ಹೆಸರು / ಸ್ಥಳ ಬದಲಾವಣೆ ಬಗ್ಗೆ.

ನಿರ್ಣಯ: ದಿನಾಂಕ 12.06.2023ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಡಿಸಿ :ವಿ.ಸ.3:3 (2023)**

ವಿಷಯ: ವಿಕಾಸ್ ಕಾಲೇಜು, ಮಂಗಳೂರು ಎಂಬ ವಿದ್ಯಾಸಂಸ್ಥೆಯ ಹೆಸರು ಮತ್ತು ಆಡಳಿತ ಮಂಡಳಿಯ ಬದಲಾವಣೆ ಬಗ್ಗೆ.

ನಿರ್ಣಯ: ದಿನಾಂಕ 12.06.2023ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಡಿಸಿ :ವಿ.ಸ.3:4 (2023)**

ವಿಷಯ: ಇಂಡಸ್ ಕಾಲೇಜು, ಪುತ್ತೂರು, ಎಂಬ ವಿದ್ಯಾಸಂಸ್ಥೆಯ ಹೆಸರು/ ಆಡಳಿತ ಮಂಡಳಿ / ಸ್ಥಳ ಬದಲಾವಣೆ ಬಗ್ಗೆ.

ನಿರ್ಣಯ: ದಿನಾಂಕ 12.06.2023ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಡಿಸಿ :ವಿ.ಸ.3:5 (2023)**

ವಿಷಯ: ಸ್ವಸ್ತಿಕಾ ನ್ಯಾಷನಲ್ ಸ್ಕೂಲ್, ಮಂಗಳೂರು ಎಂಬ ವಿದ್ಯಾಸಂಸ್ಥೆಯ ಹೆಸರನ್ನು ಸ್ವಸ್ತಿಕಾ ನ್ಯಾಷನಲ್ ಬಿಸಿನೆಸ್ ಸ್ಕೂಲ್ (Swastika National Business School) ಎಂದು ಬದಲಾಯಿಸುವ ಕುರಿತು.

ನಿರ್ಣಯ: ದಿನಾಂಕ 12.06.2023ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಸಿಡಿಸಿ :ವಿ.ಸ.3:6 (2023)**

ವಿಷಯ: ಹಾರ್ವಡ್ ಇನ್ಸ್ಟಿಟ್ಯೂಟ್ ಆಫ್ ಫೈರ್ ಆಂಡ್ ಸೇಫ್ಟಿ ಇಂಜಿನಿಯರಿಂಗ್, ಮಂಗಳೂರು ಎಂಬ ವಿದ್ಯಾಸಂಸ್ಥೆಯ ಸ್ಥಳ ಬದಲಾವಣೆ ಬಗ್ಗೆ.

ನಿರ್ಣಯ: ದಿನಾಂಕ 12.06.2023ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಡಿಸಿ : ವಿ.ಸ.3:7 (2023)**

ವಿಷಯ: ಶಿವಾಸ್ ಇಂಟರ್‌ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಪ್ರೊಫೆಷನಲ್ ಇನ್ನೋವೇಷನ್ಸ್, ದೇರಳಕಟ್ಟೆ ಎಂಬ ವಿದ್ಯಾಸಂಸ್ಥೆಗೆ ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಹೊಸ ಸಂಯೋಜನೆ ಮಂಜೂರಾತಿ ಬಗ್ಗೆ.

ನಿರ್ಣಯ: ದಿನಾಂಕ 12.06.2023ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಡಿಸಿ :ವಿ.ಸ.3:8 (2023)**

ವಿಷಯ: ವೈಭವ್ ಕಾಲೇಜು, ಎನ್.ಹೆಚ್.66, ದ್ವೀಪ ಬಿಲ್ಡಿಂಗ್, ಹಂಗಳೂರು, ಕುಂದಾಪುರ, ಉಡುಪಿ ಎಂಬ ವಿದ್ಯಾಸಂಸ್ಥೆಗೆ ಶೈಕ್ಷಣಿಕ ವರ್ಷ 2023- 24ನೇ ಸಾಲಿಗೆ ಹೊಸ ಸಂಯೋಜನೆ ಮಂಜೂರಾತಿ ಬಗ್ಗೆ.

ನಿರ್‍ಣಯ: ದಿನಾಂಕ 12.06.2023ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಡಿಸಿ :ವಿ.ಸ.3:9 (2023)**

ವಿಷಯ: ಶರಾಫ್ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ ಆಂಡ್ ಆರ್ಟ್ಸ್, ಮಂಜನಾಡಿ ಎಂಬ ವಿದ್ಯಾಸಂಸ್ಥೆಗೆ ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಹೊಸ ಸಂಯೋಜನೆ ಮಂಜೂರಾತಿ ಬಗ್ಗೆ.

ನಿರ್ಣಯ: ದಿನಾಂಕ 12.06.2023ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಡಿಸಿ :ವಿ.ಸ.3:10 (2023)**

ವಿಷಯ: ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಮುಂದುವರಿಕೆ, ವಿಸ್ತರಣಾ ಮತ್ತು ಹೊಸ ಶಾಶ್ವತ ಸಂಯೋಜನೆ ಮಂಜೂರು ಮಾಡುವ ಬಗ್ಗೆ.

ನಿರ್ಣಯ: ದಿನಾಂಕ 12.06.2023ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಡಿಸಿ :ವಿ.ಸ.3:11 (2023)**

ವಿಷಯ: ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಮುಂದುವರಿಕೆ ಮತ್ತು ವಿಸ್ತರಣಾ ಸಂಯೋಜನೆ ಮಂಜೂರು ಮಾಡುವ ಬಗ್ಗೆ.

ನಿರ್ಣಯ: ದಿನಾಂಕ 12.06.2023ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಸಿಡಿಸಿ :ವಿ.ಸ.3:12 (2023)**

ವಿಷಯ: ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಮುಂದುವರಿಕೆ ಸಂಯೋಜನೆ ಮಂಜೂರು ಮಾಡುವ ಬಗ್ಗೆ.

ನಿರ್ಣಯ: ದಿನಾಂಕ 12.06.2023ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಏಮ್ಸ್ ಪ್ರಥಮ ಪ್ರಥಮ ದರ್ಜೆ ಕಾಲೇಜು, ಕಡಬ, ಪುತ್ತೂರು ಎಂಬ ವಿದ್ಯಾಸಂಸ್ಥೆಯಲ್ಲಿ ಕಟ್ಟಡ ಕಾಮಗಾರಿ ಮತ್ತು ಇತರೇ ಮೂಲಭೂತ ಸೌಲಭ್ಯಗಳ ಕೊರತೆಯಿರುವುದರಿಂದ ಸದರಿ ಕಾಲೇಜಿನ ಕಟ್ಟಡ ಕಾಮಗಾರಿಯು ಪೂರ್ಣಗೊಂಡಿರುವ ಬಗ್ಗೆ ಕಾಲೇಜಿನಿಂದ ದೃಢೀಕರಣವನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ತದನಂತರ ವಿಶ್ವವಿದ್ಯಾನಿಲಯದಿಂದ ಮರು ಪರಿಶೀಲನಾ ಸಮಿತಿಯು ಕಾಲೇಜಿಗೆ ಬೇಟಿ ನೀಡಿ, ಸದರಿ ಕಟ್ಟಡ ಕಾಮಗಾರಿ ಹಾಗೂ ಇತರೇ ಮೂಲಭೂತ ಸೌಕರ್ಯಗಳು ತೃಪ್ತಿಕರವಾಗಿರುವ ಬಗ್ಗೆ ವರದಿ ಸಲ್ಲಿಸಿದಲ್ಲಿ ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಮುಂದುವರಿಕೆ ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಇತರ ವಿಷಯಗಳು**

1. ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ಕಾಲೇಜುಗಳಿಂದ ಬೇಡಿಕೆ ಬಂದಲ್ಲಿ ಅನುಮೋದಿತ ವಿದ್ಯಾರ್ಥಿ ಪರಿಮಿತಿಯ ಮೇಲೆ ಶೇಕಡ 10ರಷ್ಟು ಹೆಚ್ಚುವರಿಯಾಗಿ ವಿದ್ಯಾರ್ಥಿ ಪರಿಮಿತಿಯನ್ನು ಮಂಜೂರು ಮಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕುಲಸಚಿವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/- | ಸಹಿ/- |
| ಕುಲಸಚಿವರು | ಕುಲಪತಿಗಳು. |